# ಬಿದರಕೋಟೆ ಗ್ರಾಮ ಪಂಚಾಯಿತಿ ಕಾರ್ಯಾಲಯ

ಬಿದರಕೋಟೆ , ಕೊಪ್ಪ ಹೋಬಳಿ, ಮದ್ದೂರು ತಾಲ್ಲೂಕು

ದಿನಾಂಕ: 11/05/2020

ಉಲ್ಲೇಖ ಸಂ :01/2020–21

ಗೆ,

ಶ್ರೀ ಬಿ.ಎಸ್.ಯಡಿಯೂರಪ್ಪ ಮಾನ್ಯ ಮುಖ್ಯಮಂತ್ರಿಗಳು

ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು,

**ವಿಷಯ: ಗ್ರಾಮ ಪಂಚಾಯತ್‌ಗಳಿಗೆ ಆಡಳಿತಾಧಿಕಾರಿಗಳು ಅಥವಾ ಆಡಳಿತ ಸಮಿತಿಯ ನೇಮಕದ ಬದಲಿಗೆ ಹಾಲಿ ಇರುವ ಚುನಾಯಿತ ಪ್ರತಿನಿಧಿಗಳನ್ನೇ ಚುನಾವಣೆ ನಡೆಯುವವರೆಗೆ ಮುಂದುವರೆಸುವ ಬಗ್ಗೆ ಒತ್ತಾಯಿಸಿ ಪತ್ರ.**

ಇಡೀ ದೇಶಾದ್ಯಂತ ವ್ಯಾಪಕವಾಗಿ ಹರಡುತ್ತಿರುವ ಕೋವೀಡ್–19ರ ಪರಿಣಾಮ ಕರ್ನಾಟಕದ ಮೇಲೂ ಆಗಿರುವುದರಿಂದ ರಾಜ್ಯದಲ್ಲಿನ ಆಡಳಿತ ವ್ಯವಸ್ಥೆಯಲ್ಲಿ ವಿವಿಧ ರೀತಿಯ ಬದಲಾವಣೆಗಳಾಗಿವೆ. ಇದರ ಪರಿಣಾಮ, ಕರ್ನಾಟಕದಲ್ಲಿ, ಇದೇ ಮೇ ತಿಂಗಳ ಅಂತ್ಯದೊಳಗೆ ನಡೆಯಬೇಕಿದ್ದ ಗ್ರಾಮ ಪಂಚಾಯತ್ ಚುನಾವಣೆಯ ಮೇಲೂ ಉಂಟಾಗಿದೆ. ಈ ಕೋವೀಡ್–19ರ ಸಂಕಷ್ಟದ ಸಮಯದಲ್ಲಿ ಚುನಾವಣೆಯಂತಹ ಕಾರ್ಯವನ್ನು ಕೈಗೆತ್ತಿಕೊಳ್ಳುವುದು ಅಸಾಧ್ಯವೇಸರಿ. ಈ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರ ಈಗಾಗಲೇ ಹೇಳಿರುವಂತೆ ಸುಮಾರು 6 ತಿಂಗಳುಗಳ ಕಾಲ ಚುನಾವಣೆ ಮುಂದುಡಬೇಕಾಗಿರುವುದು ಅನಿವಾರ್ಯವಾಗಿದೆ. ಆದರೆ ಆಡಳಿತಾಧಿಕಾರಿಯ ನೇಮಕ ಅಥವಾ ಬೇರ್ಯಾವುದೋ ಉಸ್ತುವಾರಿ ಸಮಿತಿ ನೇಮಕ ಮಾಡುವ ಸರ್ಕಾರದ ಆಲೋಚನೆ ಕಾನೂನಿನಲ್ಲಿ ಅವಾಕಾಶವಿದ್ದರೂ ಈ ವಿಕೋಪದ ಪರಿಸ್ಥಿತಿ ಇರುವಾಗ ಸೂಕ್ತವಾದುದಲ್ಲ. ಚುನಾಯಿತ ಪ್ರತಿನಿಧಿಗಳನ್ನು ಹಾಗೂ ಅಧಿಕಾರಿಗಳು ಸರ್ಕಾರದ ರಥದ ಎರಡು ಗಾಲಿಗಳಿದ್ದಂತೆ. ಸರ್ಕಾರದರಥ ಮುನ್ನಡೆಸುವಲ್ಲಿ ಇಬ್ಬರ ಪತ್ರವೂ ಬಹಳ ಪ್ರಮುಕವಾದುದ್ದು. ಗ್ರಾಮ ಪಂಚಾಯತ್ ಒಂದು ಸ್ಥಳೀಯ ಸ್ವಂತ ಸರ್ಕಾರ, ಹೀಗಾಗಿಯೇ ಇಡೀ ರಾಜ್ಯದಾದ್ಯಂತ ಕೋವೀಡ್–19ರ ಪರಿಸ್ಥಿತಿ ಘೋಷಣೆಯ ಆದಾಗ ಮೊಟ್ಟಮೊದಲು ಸರ್ಕಾರ ಮಾಡಿದ ಕೆಲಸವೆಂದರೆ ಪಂಚಾಯತ್ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುವ ಎಲ್ಲಾ ಇಲಾಖೆಗಳ, ಸ್ವಯಂಸೇವಾ ಸಂಸ್ಥೆಗಳ, ಸ್ವಯಂಸೇವಕರ ಸಂಯೋಜನೆಯಲ್ಲಿ ಜಾರಿ ಪಡೆ (ಕಾರ್ಯಪಡೆ) ರೂಪಿಸಿ ಇಡೀ ಪಂಚಾಯತ್ ನ ವಿಕೋಪ ನಿರ್ವಹಣೆಯ ಜವಾಬ್ದಾರಿಯ ನೇತೃತ್ವವನ್ನು ಗ್ರಾಮ ಸರ್ಕಾರಕ್ಕೆ ನೀಡಿದ್ದು, ಚುನಾಯಿತ ಪ್ರತಿನಿಧಿಗಳಾದ ನಾವು ಪಂಚಾಯತ್ ಆಡಳಿತದಲ್ಲಿ ಸಕ್ರೀಯವಾಗಿ ಭಾಗವಹಿಸಿ ಅನುಭವ ಪಡೆದು ಗ್ರಾಮ ಪಂಚಾಯತ್ ಅಭಿವೃದ್ಧಿಯಲ್ಲಿ ನಮ್ಮ ಪಾತ್ರಜವಾಬ್ದಾರಿಗಳ ಮಹತ್ವವನ್ನು ಆಳವಾಗಿ ಅರ್ಥೈಸಿಕೊಂಡಿದ್ದರಿಂದ ವಿಕೋಪದ ಪರಿಸ್ಥಿತಿಯನ್ನು ಸಹ ನಿಭಾಯಿಸಲು ಸ್ಥಳೀಯ ಸರ್ಕಾರವಾಗಿ ನಮಗೆ ಸಾಧ್ಯವಾಯಿತು. ಈ ಸಂದರ್ಭದಲ್ಲಿ ಗ್ರಾಮೀಣ ಜನರ ಅಗತ್ಯತೆಗಳೇನು, ಇಲ್ಲಿನ ಪರಿಸ್ಥಿತಿ ಹೇಗಿದೆ, ಆಗಬೇಕಾದ ಪ್ರಮುಕ ಕಾರ್ಯಗಳೇನು, ಮುಂದಿರುವ ಸವಾಲುಗಳೇನು ಎಂಬುದನ್ನು ಕೂಲಂಕುಶವಾಗಿ ಗಮನಿಸಿದ್ದೇವೆ. ಒಂದು ರೀತಿಯಲ್ಲಿ ತುರ್ತು ಪರಿಸ್ಥಿತಿಯಂತೆ ಇರುವ ಈ ಸಮಯದಲ್ಲಿ ನಾವು ಸ್ಥಳೀಯ ಸರ್ಕಾರದ ಅವಿಭಾಜ್ಯ ಅಂಗವಾಗಿ, ವಿಕೋಪವನ್ನು ಸಮರ್ಥವಾಗಿ ನಿಭಾಯಿಸುವಲ್ಲಿ, ಜನರ ಸಂಕಷ್ಟಗಳಿಗೆ ಸ್ಪಂದಿಸುವಲ್ಲಿ ಉತ್ತರದಾಯಿಯಾಗಿ ಕಾರ್ಯನಿರ್ವಹಿಸುತ್ತಿರುತ್ತೇವೆ. ಚುನಾಯಿತ ವರ್ಗ

Scanned with CamScanner

ಹಾಗೂ ಅಧಿಕಾರಿ ವರ್ಗ ಒಗ್ಗೂಡಿ ಆಡಳಿತ ನಡೆಸಿರುವುದೇ ಈ ಪರಿಸ್ಥಿತಿಯ ಸಮರ್ಪಕ ನಿರ್ವಹಣೆಗೆ ಪ್ರಮುಖ ಕಾರಣ. ಈ ವಿಕೋಪದ ಪರಿಸ್ಥಿತಿ ಇನ್ನೂ ಮುಂದುವರೆಯುತ್ತಿರುವ ಈ ಸಾಲಿನ ಸಮಯದಲ್ಲಿ, ಪಂಚಾಯತ್ ಆಡಳಿತಕ್ಕೆ ಕೇವಲ ಆಡಳಿತಾಧಿಕಾರಿಯ ಅಥವಾ ಉಸ್ತುವಾರಿ ಸಮಿತಿಯ ನೇಮಕ ಅಸಮಂಜಸವಾದದು. ತಮ್ಮ ಸರ್ಕಾರದ ಈ ಆಲೋಚನೆ, ನಿರ್ಧಾರವನ್ನು ತಕ್ಷಣವೇ ಕೈಬಿಟ್ಟು, ಪ್ರಸ್ತುತ ಇರುವ ಚುನಾಯಿತ ಪ್ರತಿನಿಧಿಗಳನ್ನು ಒಳಗೊಂಡಿರುವ ಸ್ಥಳೀಯ ಸರ್ಕಾರವನ್ನೇ ಮಧ್ಯಂತರ ಸ್ಥಳೀಯ ಸ್ವಯಂ ಸರ್ಕಾರವಾಗಿ ಮುಂದುವರೆಸಬೇಕಾಗಿ ಈ ಮೂಲಕ ಕರ್ನಾಟಕ ರಾಜ್ಯ ಸರ್ಕಾರವನ್ನು ಒತ್ತಾಯಿಸಿ ನಮ್ಮ ಪಂಚಾಯತ್ ನ ಸಾಮಾನ್ಯ ಸಭೆಯ ನಿರ್ಣಯವನ್ನು ಮಂಡಿಸುತ್ತೀದ್ದೇವೆ. ಇದೇ ಪಂಚಾಯತ್ ನ ಜನರಿಂದ ಚುನಾಯಿತರಾದ ನಾವು ಸ್ಥಳೀಯ ಸರ್ಕಾರದ ಭಾಗವಾಗಿ ನಮ್ಮ ಗ್ರಾಮದ ಜನರಿಗೆ, ಗ್ರಾಮದ ಅಭಿವೃದ್ಧಿಗೆ ಬದ್ದರಾಗಿದ್ದೇವೆ.

ಗ್ರಾಮ ಪಂಚಾಯತ್ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಸದಸ್ಯರು ಬಿದರಕೋಟೆ ಗ್ರಾಮ ಪಂಚಾಯತ್, ಮದ್ದೂರು ತಾಲ್ಲೂಕು, ಮಂಡ್ಯ ಜಿಲ್ಲೆ.

ಸ್ಥಳ:ಬಿದರಕೋಟೆ
ದಿನಾಂಕ:07/05/2020

ಅಧ್ಯಕ್ಷರು
ಬಿದರಕೋಟೆ ಗ್ರಾಮ ಪಂಚಾಯಿತಿ
ಮದ್ದೂರು ತಾಲ್ಲೂಕು.

ಉಪಾಧ್ಯಕ್ಷರು
ಬಿದರಕೋಟೆ ಗ್ರಾಮ ಪಂಚಾಯಿತಿ
ಮದ್ದೂರು ತಾಲ್ಲೂಕು

ಯಥಾ ಪ್ರತಿ:

- ಮಾನ್ಯ ಸಚಿವರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಕರ್ನಾಟಕ ಸರ್ಕಾರ.
- ಹೆಚ್ಚುವರಿ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ.
- ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಕರ್ನಾಟಕ ಸರ್ಕಾರ.
- ಗ್ರಾಮ ಪಂಚಾಯತ್ ಹಕ್ಕೊತ್ತಾಯ ಆಂದೋಲನ, ಕರ್ನಾಟಕ.

Scanned with CamScanner

ಬಿದರಕೋಟೆ ಗ್ರಾಮ ಪಂಚಾಯತ್, ಮದ್ದೂರ್ ತಾಲ್ಲೂಕು, ಮಂಡ್ಯ ಜಿಲ್ಲೆ,

| ಕ್ರ.ಸಂ | ಹೆಸರು | ಪದನಾಮ | ಸಹಿ |
|---|---|---|---|
| 1 | ಸುಜಾತ | ಅಧ್ಯಕ್ಷರು | ಸುಜಾತ |
| 2 | ಪ್ರಕಾಶ್ ಜಿ.ಎನ್ | ಉಪಾಧ್ಯಕ್ಷರು | G.N. Prakash |
| 3 | ಪ್ರತಿಭಾ ಬಿ | ಸದಸ್ಯರು | |
| 4 | ಚಲುವಪ್ಪಾಜಿ | ಸದಸ್ಯರು | ಚೆಲುವಪ್ಪಾಜಿ |
| 5 | ಕೆಂಪೇಗೌಡ | ಸದಸ್ಯರು | ಕೆಂಪೇಗೌಡ |
| 6 | ಸುರೇಶ ಬಿ | ಸದಸ್ಯರು | ಬಿ. ಸುರೇಶ |
| 7 | ಜಿ.ಎಮ್ ಪುಷ್ಪಲತಾ | ಸದಸ್ಯರು | GM ಪುಷ್ಪಲತ |
| 8 | ಪರಮೇಶ್ ವಿ.ಎ | ಸದಸ್ಯರು | ಪರಮೇಶ್ |
| 9 | ದೇವಮ್ಮ | ಸದಸ್ಯರು | ದೇವಮ್ಮ |
| 10 | ಶಂಕರ್ ಜಿ | ಸದಸ್ಯರು | ಜಿ ಶಂಕರ್ |
| 11 | ಸುಶೀಲಮ್ಮ | ಸದಸ್ಯರು | ಸುಶೀಲಮ್ಮ |
| 12 | ವಿಜಯ ಜಿ.ಟಿ | ಸದಸ್ಯರು | GT ವಿಜಯ |
| 13 | ಮಲ್ಲೇಶ | ಸದಸ್ಯರು | ಮಲ್ಲೇಶ |
| 14 | ಶ್ರೀನಿವಾಸ ಹೆಚ್.ಜಿ | ಸದಸ್ಯರು | H.G. Srinivas |
| 15 | ರುಕ್ಮಿಣಿ ಜಿ.ಎನ್ | ಸದಸ್ಯರು | |
| 16 | ಪುಟ್ಟತಾಯಮ್ಮ | ಸದಸ್ಯರು | ಪುಟ್ಟತಾಯಮ್ಮ |
| 17 | ಜಯಮ್ಮ | ಸದಸ್ಯರು | ಜಯಮ್ಮ |

Scanned with CamScanner